ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.
**ಸಿಸಿ 352/2024**

| | | | |
|---|---|---|---|
| ಸಾಕ್ಷಿದಾರರ ಹೆಸರು | - | ರಾಜು | **ಚಾ.ಸಾ.-6** |
| ತಂದೆಯ/ಗಂಡನ ಹೆಸರು | - | ಗೋಪಾಲರಾಜು | **ಫ್ರಾ.ಸಾ.-5** |
| ವಯಸ್ಸು | - | 36 ವರ್ಷ | |
| ಉದ್ಯೋಗ | - | ವ್ಯವಸಾಯ | |
| ವಾಸಸ್ಥಳಃ | - | ಅರುವನಹಳ್ಳಿ | |

ದಿನಾಂಕಃ 07-08-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ

ಚಾ.ಸಾ.1 ರಿಂದ 5, 7 ಮತ್ತು 8 ರವರ ಪರಿಚಯವಿರುತ್ತದೆ. ನಮ್ಮ ಊರಿನವರು. ಆರೋಪಿತರ ಪರಿಚಯ ಇದೆ.

ಈಗೇ 2 ವರ್ಷಗಳ ಹಿಂದೆ ಆರೋಪಿತರು ಸರ್ವೆ ವಿಚಾರವಾಗಿ ಚಾಸಾ-1 ರವರೊಂದಿಗೆ ಗಲಾಟೆ ಮಾಡಿರುತ್ತಾರೆ ಮತ್ತು ಸರ್ವೆ ಮಾಡಲು ಬಿಟ್ಟಿರುವುದಿಲ್ಲ, ಚಾಸಾ-1 ರವರಿಗೆ 1 ಮತ್ತು 4 ನೇ ಆರೋಪಿತರು ಹಲ್ಲೆ ಮಾಡಿರುತ್ತಾರೆ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಭಾಗಾಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿ ನೀಡಲಾಯಿತು. )**

ಪಾಟೀ ಸವಾಲುಃ ಮಾನ್ಯ ಎ ಪಿ ಪಿ ರವರಿಂದ

ದಿಃ 20-01-2024 ರಂದು ಚಾಸಾ-1 ರವರ ಜಮೀನಿನ ಬಳಿ ಸರ್ವೆಯರ್ ರವರು ಅಳತೆ ಮಾಡಲು ಬಂದಿದ್ದಾಗ ಸ್ಥಳದಲ್ಲಿ ಚಾಸಾ-1, 2 ರವರು ಇದ್ದು, ಮಧ್ಯಾಹ್ನ 12-15 ಗಂಟೆ ಸಮಯದಲ್ಲಿ ಆರೋಪಿತರು ಗಲಾಟೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಆರೋಪಿತರು ಚಾಸಾ-1 ಮತ್ತು 2 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ ವತ್ತು ಆರೋಪಿತರು ಚಾಸಾ-1 ರವರ ಜುಟ್ಟನ್ನು ಹಿಡಿದು ಎಳೆದಾಡಿ ಕೈಗಳಿಂದ ಮೈ ಮೇಲೆ ಹೊಡೆದು ಸಾರ್ವಜನಿಕವಾಗಿ ಅವಮಾನ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಾನು, ಚಾಸಾ-4, 5, 7 ರಿಂದ 8 ರವರುಗಳು ಜಗಳವನ್ನು ಬಿಡಿಸಿರುತ್ತೇವೆ ಎಂದರೆ ಸರಿಯಲ್ಲ. ನಂತರ ದಿಃ 22-01-2024 ರಂದು ಸಂಜೆ 05-00 ಗಂಟೆ ಸಮಯದಲ್ಲಿ ಚಾಸಾ-1 ರವರು ಗಂಡನಾದ ಚಾಸಾ-3 ರವರು 1 ನೇ ಆರೋಪಿಯ ಮನೆಯ ಮುಂದಿನ ರಸ್ತೆಯಲ್ಲಿ ಹೋಗುವಾಗ ಆರೋಪಿತರೆಲ್ಲಾರೂ ಜಮೀನಿನ ವಿಚಾರವಾಗಿ ಚಾಸಾ-3 ರವರನ್ನು ಉದ್ದೇಶಿಸಿ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆಂದರೆ ಸರಿಯಲ್ಲ ಮತ್ತು ಚಾಸಾ-3 ರವರನ್ನು ಅಡ್ಡಗಟ್ಟಿ ತಡೆದು ನಿಲ್ಲಿಸಿ ಆರೋಪಿತರೆಲ್ಲಾರೂ ಕೈಗಳಿಂದ ಹೊಡೆದಿರುತ್ತಾರೆಂದರೆ ಸರಿಯಲ್ಲ ನಂತರ ನಿಮ್ಮ ಜಮೀನನ್ನು ಅಳತೆ ಮಾಡಿಸಲು ಬಿಡುವುದಿಲ್ಲ, ಅಳತೆ ಮಾಡಿಸಿದರೇ ಸಾಯಿಸುತ್ತೇವೆಂದು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ-1, ಚಾಸಾ-8, ಚಾಸಾ-4 ರವರುಗಳು ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಈಗ ನನಗೆ ಓದಿ ಹೇಳಿದಂತೆ ದಿಃ 26-01-2024 ರಂದು ಪೊಲೀಸರ ಮುಂದೆ ಹೇಳಿಕೆಯನ್ನು

ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗೆಳೆದ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ಈ ಪ್ರಕರಣದ ಎಲ್ಲಾ ವಿಚಾರಗಳು ನಿಮಗೆ ಗೊತ್ತಿದ್ದರೂ ಸಹ ಅರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.
<u>ಪಾಟೀ ಸವಾಲು ಆರೋಪಿ ಪರ ವಕೀಲರಿಂದ ಏನೂ ಇಲ್ಲ.</u>

ಮರು ವಿಚಾರಣೆ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು
ಸಾಕ್ಷಿ ಸಹಿ ಮತ್ತು ಜೆ ಎಂ ಎಫ್ ಸಿ , ಮದ್ದೂರು.